ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಭಾಷಾ ಅಲ್ಪಸಂಖ್ಯಾತ ಶಾಲೆಗಳಲ್ಲಿ ರೋಷ್ಟರ್ ವಿನಾಯಿತಿ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

56 (166) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಭಾಷಾ ಅಲ್ಪ ಸಂಖ್ಯಾತ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಇರುವ ನಿಯಮಾವಳಿಗಳೇನು; ರೋಷ್ಟರ್ ಅನ್ವಯವಾಗುತ್ತದೆಯೇ; ಪ್ರಸ್ತುತ ಭಾಷಾ ಅಲ್ಪಸಂಖ್ಯಾತ ಶಾಲಾ ಕಾಲೇಜುಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ; (ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ವಿವರ ನೀಡುವುದು)

(ಆ) ಈ ರೋಷ್ಟರ್ ನಿಯಮಾವಳಿಗಳಿಂದಲೇ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸಾಧ್ಯವಾಗದೇ ರೋಷ್ಟರ್ ನಿಯಮಾವಳಿಗಳಲ್ಲಿ ವಿನಾಯಿತಿಯನ್ನು ನೀಡುವಂತೆ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಯಾವ ಯಾವ ವಿನಾಯಿತಿಗಳನ್ನು ನೀಡಲು ಸರ್ಕಾರ ಮುಂದಾಗಿದೆ; (ವಿವರವನ್ನು ಒದಗಿಸುವುದು)

(ಇ) ಈ ನಿಯಮಾವಳಿಗಳಿಗೆ ವಿನಾಯಿತಿ ನೀಡುವ ಬಗ್ಗೆ ಈ ಹಿಂದೆ ಸದನದಲ್ಲಿ ಭರವಸೆ ನೀಡಲಾಗಿತ್ತೇ; ನೀಡಿದ್ದರೆ, ಈವರೆವಿಗೂ ಯಾವ ಕಾರಣಕ್ಕಾಗಿ ವಿನಾಯಿತಿ ನೀಡಿ ಆದೇಶ ಹೊರಡಿಸಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಂಡಿರುವುದಿಲ್ಲ ; (ಪ್ರಸ್ತಾವನೆಯ ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಈ ಪ್ರಾಥಮಿಕ, ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಮಕ್ಕಳ ಸಂಖ್ಯೆಯ ಅನುಪಾತ ಎಷ್ಟು; ಈ ನಿಯಮಾವಳಿಗಳಿಂದ ಈ ಶಿಕ್ಷಣ ಸಂಸ್ಥೆಗಳಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ; ಭಾಷಿಕ/ಧಾರ್ಮಿಕ ಅಲ್ಪಸಂಖ್ಯಾತ ಶಾಲೆಗಳಲ್ಲಿ ತಾರತಮ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?